(2) ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ವಿಧೇಯಕ, 1994

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎಂ. ವೀರಪ್ಪ ಮೊಯಿಲಿ :- (ಮುಖ್ಯ ಮಂತ್ರಿ) ಮಾನ್ಯ ಅಧ್ಯಕ್ಷರೇ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ವಿಧೇಯಕ, 1994ನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

ಅಧ್ಯಕ್ಷರು :- ಪ್ರಸ್ತಾಪ ಏನಂದರೆ, ''ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ವಿಧೇಯಕ , 1994ನ್ನು ಪರ್ಯಾಲೋಚಿಸುವುದು''

ಪ್ರಸ್ತಾಪ ಅಂಗೀಕರಿಲ್ಪಟ್ಟಿತು.

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 18ರವರೆಗೆ:-

ಅಧ್ಯಕ್ಷರು:- ''ಖಂಡ 2 ರಿಂದ 18ರವರೆಗೆ ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 18ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ :-

ಅಧ್ಯಕ್ಷರು :- ಪ್ರಸ್ತಾಪ ಏನೆಂದರೆ ''ಮೊದಲ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾಪ ಅಂಗೀಕರಿಲ್ಪಟ್ಟಿತು

(ಮೊದಲ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾಪದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲ್ಲಿ:- ಮಾನ್ಯ ಅಧ್ಯಕ್ಷರೇ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ವಿಧೇಯಕ, 1994ನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾಪ ಏನೆಂದರೆ ''ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ವಿಧೇಯಕ, 1994ನ್ನು ಅಂಗೀಕರಿಸುವುದು''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(3) ಕರ್ನಾಟಕ ಬಾಡಿಗೆ ನಿಯಂತ್ರಣ (ತಿದ್ದುಪಡಿ) ವಿಧೇಯಕ 1994

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಧರ್ಮಸಿಂಗ್:- (ಕಂದಾಯ ಮಂತ್ರಿ) ಮಾನ್ಯ ಅಧ್ಯಕ್ಷರೇ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ಬಾಡಿಗೆ ನಿಯಂತ್ರಣ (ತಿದ್ದುಪಡಿ) ವಿಧೇಯಕ 1994ನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು